Akashvani: Bangalore
National Bulletin In Kannada
26.06.2026: 7.35 AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
26.06.2026: 7.35AM
**********

**ಮುಖ್ಯಾಂಶಗಳು :**

1. ಬಿಕ್ಕಟ್ಟಿನ ಸಮಯದಲ್ಲಿ ಆರ್ಥಿಕ ಸ್ಥಿರತೆ ಕಾಪಾಡಿಕೊಳ್ಳಲು ಭಾರತ ಉತ್ತಮವಾಗಿ ಸಜ್ಜಾಗಿದೆ - ರಾಷ್ಟ್ರಪತಿ ದ್ರೌಪದಿ ಮುರ್ಮು
2. ನೆದರ್‌ಲ್ಯಾಂಡ್ಸ್ ರಾಣಿ ಮ್ಯಾಕ್ಸಿಮಾ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ
3. ವೆನೆಜುವೆಲಾ ಭೂಕಂಪ - ಮೃತರ ಸಂಖ್ಯೆ ೧೮೮ಕ್ಕೆ ಏರಿಕೆ; ಮುಂದುವರಿದ ರಕ್ಷಣಾ ಕಾರ್ಯಾಚರಣೆ
4. ಮಹಿಳಾ ಟಿ-೨೦ ಕ್ರಿಕೆಟ್; ಬಾಂಗ್ಲಾದೇಶ ವಿರುದ್ಧ ಭಾರತ ತಂಡಕ್ಕೆ ೫ ವಿಕೆಟ್‌ಗಳ ಭರ್ಜರಿ ಗೆಲುವು

*********

ಬಿಕ್ಕಟ್ಟಿನ ಸಮಯದಲ್ಲಿ ತನ್ನ ಆರ್ಥಿಕ ಸ್ಥಿರತೆಯನ್ನು ಕಾಪಾಡಿಕೊಳ್ಳಲು ಮತ್ತು ಅಭಿವೃದ್ಧಿ ಆದ್ಯತೆಗಳನ್ನು ಕೈಗೊಳ್ಳಲು ಭಾರತ ಉತ್ತಮವಾಗಿ ಸಜ್ಜಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ರಾಷ್ಟ್ರಪತಿ ಭವನದಲ್ಲಿ ನಿನ್ನೆ ೨೦೨೩ ಮತ್ತು ೨೦೨೪ ಬ್ಯಾಚ್‌ಗಳ ಮಿಲಿಟರಿ ಎಂಜಿನಿಯರ್ ಸೇವೆಗಳ ಅಧಿಕಾರಿ ತರಬೇತಿದಾರರನ್ನು ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿಗಳು, ಸ್ವಾವಲಂಬನೆಯು ರಾಷ್ಟ್ರಗಳಿಗೆ ಕಾರ್ಯತಂತ್ರದ ಅಗತ್ಯತೆಯಾಗಿದೆ ಎಂದರು. ಸ್ಥಳೀಯ ರಕ್ಷಣಾ ಸಾಮರ್ಥ್ಯಗಳು, ಸುಧಾರಿತ ತಂತ್ರಜ್ಞಾನ ಮತ್ತು ದೃಢವಾದ ದೇಶೀಯ ಕೈಗಾರಿಕಾ ನೆಲೆಯು ಒಂದು ರಾಷ್ಟ್ರದ ಕಾರ್ಯಾಚರಣೆಯ ಸಿದ್ಧತೆ ಮತ್ತು ಕಾರ್ಯತಂತ್ರದ ಪರಿಣಾಮಕಾರಿತ್ವವನ್ನು ಹೆಚ್ಚಿಸಲು ಹೇಗೆ ಮುಖ್ಯವಾಗಿದೆ ಎಂಬುದಕ್ಕೆ 'ಆಪರೇಷನ್ ಸಿಂಧೂರ್' ಸಮಯದಲ್ಲಿ ಸಾಬೀತಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು. ನಾವೀನ್ಯತೆಯನ್ನು ಅಳವಡಿಸಿಕೊಳ್ಳಲು, ಉದಯೋನ್ಮುಖ ತಂತ್ರಜ್ಞಾನಗಳನ್ನು ಬಳಸಿಕೊಳ್ಳಲು ಮತ್ತು ಅವರು ಕೈಗೊಳ್ಳುವ ಪ್ರತಿಯೊಂದು ಯೋಜನೆಯಲ್ಲಿ ಶ್ರೇಷ್ಠತೆಗಾಗಿ ಶ್ರಮಿಸುವಂತೆ ಅವರು ಯುವ ಅಧಿಕಾರಿಗಳಿಗೆ ಸಲಹೆ ನೀಡಿದರು.

*********

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ನವದೆಹಲಿಯಲ್ಲಿ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿಯವರ ವಿಶೇಷ ನ್ಯಾಯವಾದಿ, ನೆದರ್‌ಲ್ಯಾಂಡ್ಸ್ ರಾಣಿ ಮ್ಯಾಕ್ಸಿಮಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಭಾರತದ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ನೇತೃತ್ವದ ಕ್ರಾಂತಿಯು ಹಣಕಾಸು ಸೇವೆಗಳನ್ನು ಹೆಚ್ಚು ಸುಲಭವಾಗಿ ಮತ್ತು ಕೈಗೆಟುಕುವಂತೆ ಮಾಡುತ್ತಿದೆ. ಸುಲಭತೆಯನ್ನು ಹೆಚ್ಚಿಸುತ್ತಿದೆ ಮತ್ತು ಜನರನ್ನು ಸಬಲೀಕರಣಗೊಳಿಸುತ್ತಿದೆ ಎಂಬುದರ ಕುರಿತು ಚರ್ಚಿಸಲಾಯಿತು. ಭಾರತ, ಪ್ರಪಂಚದಾದ್ಯಂತದ ಪಾಲುದಾರ ರಾಷ್ಟ್ರಗಳೊಂದಿಗೆ ತನ್ನ ಅನುಭವವನ್ನು ಹಂಚಿಕೊಳ್ಳಲು ಬದ್ಧವಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

*********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆಯಿಂದ ೨೯ರವರೆಗೆ ಸೀಶೆಲ್ಸ್ ದೇಶಕ್ಕೆ ಭೇಟಿ ನೀಡಲಿದ್ದು, ಸೀಶೆಲ್ಸ್ ರಾಷ್ಟ್ರೀಯ ದಿನದ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಭಾರತೀಯ ರಕ್ಷಣಾ

ಪಡೆಗಳ ಒಂದು ತಂಡ ಮತ್ತು ಭಾರತೀಯ ನೌಕಾಪಡೆಯ ಎರಡು ಹಡಗುಗಳು ಈ ಆಚರಣೆಗಳಲ್ಲಿ ಭಾಗವಹಿಸಲಿವೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭೇಟಿಯ ಸಂದರ್ಭದಲ್ಲಿ, ಪ್ರಧಾನಮಂತ್ರಿ ಮೋದಿ ಅವರು ಸೀಶೆಲ್ಸ್ ಅಧ್ಯಕ್ಷ ಡಾ. ಪ್ಯಾಟ್ರಿಕ್ ಹರ್ಮಿನಿ ಅವರೊಂದಿಗೆ ಮಾತುಕತೆ ನಡೆಸಲಿದ್ದು, ದ್ವಿಪಕ್ಷೀಯ ಸಹಕಾರದ ವಿವಿಧ ಕ್ಷೇತ್ರಗಳನ್ನು ಪರಿಶೀಲಿಸುವ ಜೊತೆಗೆ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಪ್ರಧಾನಮಂತ್ರಿ ಅವರು ಸೀಶೆಲ್ಸ್ ರಾಷ್ಟ್ರೀಯ ಸಂಸತ್ ಅನ್ನು ಉದ್ದೇಶಿಸಿ ಭಾಷಣ ಮಾಡಲಿದ್ದು, ಭಾರತೀಯ ಮೂಲದ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

*********

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ನವದೆಹಲಿಯಲ್ಲಿ ನಡೆಯಲಿರುವ ಮಾದಕ ದ್ರವ್ಯ-ಸಮನ್ವಯ ಕೇಂದ್ರದ ೧೦ನೇ ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಮಾದಕ ದ್ರವ್ಯ ನಿಯಂತ್ರಣ ದಳ ಆಯೋಜಿಸಿರುವ ಈ ಸಭೆಯಲ್ಲಿ, ದೇಶಾದ್ಯಂತ ಮಾದಕ ದ್ರವ್ಯ ಕಳ್ಳಸಾಗಣೆ ಮತ್ತು ಮಾದಕ ದ್ರವ್ಯ ದುರುಪಯೋಗವನ್ನು ಎದುರಿಸುವ ಪ್ರಯತ್ನಗಳನ್ನು ಪರಿಶೀಲಿಸಲು ಮತ್ತು ಬಲಪಡಿಸಲು ಕೇಂದ್ರ ಸಚಿವಾಲಯಗಳು, ರಾಜ್ಯ ಸರ್ಕಾರಗಳು ಮತ್ತು ಮಾದಕ ದ್ರವ್ಯ ಕಾನೂನು ಜಾರಿ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ, ಕೇಂದ್ರ ಗೃಹ ಸಚಿವರು ವಿವಿಧ ಪಾಲುದಾರರೊಂದಿಗೆ ವ್ಯಾಪಕ ಸಮಾಲೋಚನೆಗಳ ಮೂಲಕ ಸಿದ್ಧಪಡಿಸಲಾದ 'ಮಾದಕ ದ್ರವ್ಯ ನಿಯಂತ್ರಣ ೨೦೨೬-೨೦೨೯ರ ವಿಷನ್ ಡಾಕ್ಯುಮೆಂಟ್' ಅನ್ನು ಬಿಡುಗಡೆ ಮಾಡಲಿದ್ದಾರೆ. ಇದೇ ವೇಳೆ ಅಮಿತ್ ಶಾ ಅವರು ಎನ್‌ಸಿಬಿ ವಾರ್ಷಿಕ ವರದಿ ೨೦೨೫ ಅನ್ನು ಬಿಡುಗಡೆ ಮಾಡಲಿದ್ದಾರೆ ಹಾಗೂ ಜಮ್ಮು ಮತ್ತು ಗುವಾಹಟಿಯಲ್ಲಿ ಹೊಸದಾಗಿ ನಿರ್ಮಿಸಲಾದ ಎನ್‌ಸಿಬಿ ವಲಯ ಕಚೇರಿಗಳನ್ನು ಉದ್ಘಾಟಿಸಲಿದ್ದಾರೆ. ಮಾದಕ ವಸ್ತು ಕಳ್ಳಸಾಗಣೆ ವಿರುದ್ಧ ಸರ್ಕಾರದ ಶೂನ್ಯ ಸಹಿಷ್ಣುತಾ ನೀತಿಯನ್ನು ಬಲಪಡಿಸುವುದು ಮತ್ತು ಮಾದಕ ವಸ್ತು ಮುಕ್ತ ಭಾರತದ ದೃಷ್ಟಿಕೋನವನ್ನು ಮುನ್ನಡೆಸುವುದು ಈ ಸಭೆಯ ಗುರಿಯಾಗಿದೆ ಎಂದು ಸಚಿವಾಲಯ ತಿಳಿಸಿದೆ.

*********

ಭಾರತ-ಬ್ರಿಟನ್ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದವು ಜಾಗತಿಕ ಆರ್ಥಿಕತೆಯನ್ನು ಬೆಂಬಲಿಸುವ ಶಕ್ತಿಯ ಗಣಿಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅಭಿಪ್ರಾಯಪಟ್ಟಿದ್ದಾರೆ. ಲಂಡನ್‌ನಲ್ಲಿ ನಡೆದ ಇಂಡಿಯಾ ಗ್ಲೋಬಲ್ ಫೋರಂ, ಯುಕೆ-ಇಂಡಿಯಾ ವೀಕ್ ಉದ್ದೇಶಿಸಿ ಮಾತನಾಡಿದ ಅವರು, ಬ್ರಿಟನ್‌ನೊಂದಿಗಿನ ಮುಕ್ತ ವ್ಯಾಪಾರ ಒಪ್ಪಂದವು ಭಾರತ, ಇದುವರೆಗೆ ಮಾಡಿಕೊಂಡಿರುವ ಅತ್ಯಂತ ಸಮಗ್ರ ಒಪ್ಪಂದವಾಗಿದೆ ಎಂದು ಹೇಳಿದರು. ಜುಲೈ ೧೫ ರಿಂದ ಜಾರಿಗೆ ಬರಲಿರುವ ಭಾರತ-ಬ್ರಿಟನ್ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ ಅನುಷ್ಠಾನಕ್ಕೆ ಎರಡೂ ದೇಶಗಳ ಸಿದ್ಧತೆಯನ್ನು ಪರಿಶೀಲಿಸಲು ಸಚಿವರು ಮೂರು ದಿನಗಳ ಬ್ರಿಟನ್ ಭೇಟಿಯಲ್ಲಿದ್ದಾರೆ. ಈ ಒಪ್ಪಂದವು ಜಾಗತಿಕ ಮೌಲ್ಯ ಸರಪಳಿಗಳಲ್ಲಿ ಎರಡೂ ದೇಶಗಳನ್ನು ಮತ್ತಷ್ಟು ಸಂಯೋಜಿಸುತ್ತದೆ ಮತ್ತು ಆರ್ಥಿಕ ಸಹಕಾರ ಹಾಗೂ ಬೆಳವಣಿಗೆಗೆ ಹೊಸ ಮಾರ್ಗಗಳನ್ನು ತೆರೆಯುತ್ತದೆ ಎಂದು ಸಚಿವ ಪಿಯೂಷ್ ಗೋಯಲ್ ಪ್ರತಿಪಾದಿಸಿದರು. ರಕ್ಷಣೆ ಮತ್ತು ನಿರ್ಣಾಯಕ ಖನಿಜಗಳು ಸೇರಿದಂತೆ ಹಲವಾರು ಪ್ರಮುಖ ಕ್ಷೇತ್ರಗಳಲ್ಲಿ ಎರಡೂ ದೇಶಗಳು ಸಹಕಾರವನ್ನು ಸ್ಥಿರವಾಗಿ ವಿಸ್ತರಿಸುತ್ತಿವೆ ಎಂದು ಅವರು ಹೇಳಿದರು.

*********

ಈ ತಿಂಗಳ ೨೧ ರಂದು ನಡೆದ ನೀಟ್ ಯುಜಿ ೨೦೨೬ ಮರುಪರೀಕ್ಷೆಯ ತಾತ್ಕಾಲಿಕ ಉತ್ತರ ಕೀ ಗಳ ಕುರಿತು ಪ್ರಶ್ನಿಸಲು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ ಅಭ್ಯರ್ಥಿಗಳಿಗೆ ಅವಕಾಶ ನೀಡಿದೆ. ತಾತ್ಕಾಲಿಕ ಉತ್ತರ ಕೀಗಳು ಅಧಿಕೃತ ನೀಟ್

ವೆಬ್‌ಸೈಟ್ ತಿತಿತಿ.ಟeeಣ.ಟಣಚಿ.iಟ ನಲ್ಲಿ ಲಭ್ಯವಿದೆ. ಈ ತಿಂಗಳ ೨೮ ರವರೆಗೆ ಪ್ರತಿ ಪ್ರಶ್ನೆಗೆ ೨೦೦ ರೂಪಾಯಿ ಶುಲ್ಕವನ್ನು ಪಾವತಿಸುವ ಮೂಲಕ ಅಭ್ಯರ್ಥಿಗಳು ಆಕ್ಷೇಪಣೆಗಳನ್ನು ಸಲ್ಲಿಸಬಹುದು. ಸವಾಲನ್ನು ಸ್ವೀಕರಿಸಿದರೆ ಶುಲ್ಕವನ್ನು ಮರುಪಾವತಿಸಲಾಗುತ್ತದೆ ಎಂದು ಎನ್‌ಟಿಎ ತಿಳಿಸಿದೆ. ಮರುಪರೀಕ್ಷೆಯಲ್ಲಿ ಹಾಜರಾದ ಅಭ್ಯರ್ಥಿಗಳು ಶುಲ್ಕ ಮರುಪಾವತಿಗಾಗಿ ತಮ್ಮ ಬ್ಯಾಂಕ್ ಖಾತೆ ವಿವರಗಳನ್ನು ದೃಢೀಕರಿಸಲು ಮತ್ತು ನವೀಕರಿಸಲು ಎನ್‌ಟಿಎ ಪೋರ್ಟಲ್ ಅನ್ನು ಸಹ ತೆರೆದಿದೆ. ಬ್ಯಾಂಕ್ ಖಾತೆ ವಿವರಗಳನ್ನು ನವೀಕರಿಸಲು ಕೊನೆಯ ಈ ತಿಂಗಳ ೩೦ ಕೊನೆಯ ದಿನಾಂಕವಾಗಿದೆ ಎಂದು ಎನ್‌ಟಿಎ ತಿಳಿಸಿದೆ.

*********

ವೆನೆಜುವೆಲಾದಲ್ಲಿ ನಿನ್ನೆ ಸಂಭವಿಸಿದ ಎರಡು ಪ್ರಬಲ ಭೂಕಂಪಗಳಲ್ಲಿ ಸಾವನ್ನಪ್ಪಿದವರ ಸಂಖ್ಯೆ ೧೮೮ ಕ್ಕೆ ಏರಿದೆ ಎಂದು ವೆನೆಜುವೆಲಾದ ರಾಷ್ಟ್ರೀಯ ಸಂಸತ್ ಅಧ್ಯಕ್ಷ ಜಾರ್ಜ್ ರೊಡ್ರಿಗಸ್ ತಿಳಿಸಿದ್ದಾರೆ. ಭೂಕಂಪದಿಂದಾಗಿ ಒಂದು ಸಾವಿರದ ೫೨೦ ಜನರು ಗಾಯಗೊಂಡಿದ್ದಾರೆ. ಸುಮಾರು ೨೦೦ ಜನರು ಅವಶೇಷಗಳಡಿ ಸಿಲುಕಿಕೊಂಡಿದ್ದಾರೆ. ಅವಶೇಷಗಳಡಿ ಸಿಲುಕಿಕೊಂಡವರ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ರಾಜಧಾನಿ ಕ್ಯಾರಕಾಸ್‌ನ ಪಶ್ಚಿಮಕ್ಕೆ ೧೬೦ ಕಿಲೋಮೀಟರ್ ದೂರದಲ್ಲಿ ೭.೨ ಮತ್ತು ೭.೫ ತೀವ್ರತೆಯ ಪ್ರಬಲ ಭೂಕಂಪಗಳು ಸಂಭವಿಸಿದ ನಂತರ ಕನಿಷ್ಠ ಎರಡು ಸಾವಿರದ ೬೨೭ ಕುಟುಂಬಗಳು ತಮ್ಮ ಮನೆಗಳನ್ನು ಕಳೆದುಕೊಂಡಿವೆ ಎಂದು ಜಾರ್ಜ್ ರೊಡ್ರಿಗಸ್ ಮಾಹಿತಿ ನೀಡಿದ್ದಾರೆ.

*********

ದೇಶದ ವಿವಿಧ ಭಾಗಗಳಲ್ಲಿ ಇಂದು ಅಶೂರ-ಎ-ಮೊಹರಂ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ. ಕರ್ಬಲಾದಲ್ಲಿ ಸತ್ಯ, ಸದಾಚಾರ ಮತ್ತು ನ್ಯಾಯವನ್ನು ಎತ್ತಿಹಿಡಿಯಲು ತಮ್ಮ ಪ್ರಾಣವನ್ನೇ ಅರ್ಪಿಸಿದ ಪ್ರವಾದಿ ಮುಹಮ್ಮದ್ ಅವರ ಮೊಮ್ಮಗ ಹಜರತ್ ಇಮಾಮ್ ಹುಸೇನ್ ಮತ್ತು ಅವರ ಸಹಚರರ ಹುತಾತ್ಮತೆಯನ್ನು ಈ ದಿನ ಗುರುತಿಸುತ್ತದೆ. ಈ ಸಂದರ್ಭದಲ್ಲಿ ತಾಜಿಯಾ ಮೆರವಣಿಗೆಗಳನ್ನು ಆಯೋಜಿಸಲಾಗಿದೆ. ಕರ್ಬಲಾ ಹುತಾತ್ಮರ ಅತ್ಯುನ್ನತ ತ್ಯಾಗವನ್ನು ಎತ್ತಿ ತೋರಿಸುವ ಮಜಾಲಿಗಳು ಅಥವಾ ಧಾರ್ಮಿಕ ಸಭೆಗಳನ್ನು ಸಹ ಆಯೋಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ವ್ಯಾಪಕವಾದ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ.

*********

ಕೈಗಾರಿಕಾ ಮತ್ತು ವಾಣಿಜ್ಯ ಎಲ್‌ಪಿಜಿ ಗ್ರಾಹಕರಿಗೆ ದೊಡ್ಡ ಪರಿಹಾರವಾಗಿ, ಕೇಂದ್ರ ಸರ್ಕಾರ, ದೇಶೀಯವಲ್ಲದ ಪ್ಯಾಕ್ ಮಾಡಿದ ಎಲ್‌ಪಿಜಿ ಪೂರೈಕೆಯ ಮೇಲಿನ ಎಲ್ಲಾ ರೀತಿಯ ನಿರ್ಬಂಧಗಳನ್ನು ತೆಗೆದುಹಾಕಿದೆ. ಅಲ್ಲದೇ ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಮೊದಲು ಇದ್ದ ಮಟ್ಟಕ್ಕೆ ಸರಬರಾಜುಗಳನ್ನು ಪುನಃಸ್ಥಾಪಿಸಿದೆ. ಬಿಕ್ಕಟ್ಟಿನ ಆರಂಭದಲ್ಲಿ ಸ್ಥಗಿತಗೊಳಿಸಲಾಗಿದ್ದ ಬೃಹತ್ ಎಲ್‌ಪಿಜಿ ಪೂರೈಕೆಯನ್ನು ಬಿಕ್ಕಟ್ಟಿನ ಪೂರ್ವ ಬಳಕೆಯ ಮಟ್ಟಕ್ಕಿಂತ ಶೇಕಡಾ ೫೦ ರಷ್ಟು ಸಡಿಲಿಸಲಾಗಿದೆ. ಇದು ವಾಣಿಜ್ಯ ಮತ್ತು ಕೈಗಾರಿಕಾ ಗ್ರಾಹಕರಿಗೆ ಗಮನಾರ್ಹ ಪರಿಹಾರವನ್ನು ನೀಡುತ್ತದೆ. ಎಲ್‌ಪಿಜಿ ಪೂರೈಕೆ ಪರಿಸ್ಥಿತಿಯಲ್ಲಿ ಇತ್ತೀಚಿನ ಸುಧಾರಣೆಯ ನಂತರ ಪುನಃಸ್ಥಾಪನೆಯಾಗಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ.

*********

ಮ್ಯಾಂಚೆಸ್ಟರ್‌ನ ಎಮಿರೇಟ್ಸ್ ಓಲ್ಡ್ ಟ್ರಾಫರ್ಡ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಎ ಗುಂಪಿನ ಪಂದ್ಯದಲ್ಲಿ ಬಾಂಗ್ಲಾದೇಶ ವಿರುದ್ಧ ಭಾರತ ಐದು ವಿಕೆಟ್‌ಗಳಿಂದ ಭರ್ಜರಿ ಗೆಲುವು ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಬಾಂಗ್ಲಾದೇಶ, ನಿಗದಿತ ೨೦ ಓವರ್‌ಗಳಿಗೆ ೮ ವಿಕೆಟ್ ನಷ್ಟಕ್ಕೆ ೧೩೭ ರನ್ ಗಳಿಸಿತು. ಭಾರತದ ಪರ

ರಾಧಾ ಯಾದವ್ ಮೂರು ವಿಕೆಟ್ ಮತ್ತು ಶ್ರೀ ಚರಣಿ ಎರಡು ವಿಕೆಟ್ ಕಬಳಿಸಿದರು. ಗೆಲುವಿನ ಗುರಿ ಬೆನ್ನತ್ತಿದ ಭಾರತ, ೧೬.೫ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೩೯ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು. ೩೪ ಎಸೆತಗಳಲ್ಲಿ ೫೩ ರನ್ ಸಿಡಿಸಿದ ಶಫಾಲಿ ವರ್ಮಾ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

*********

ಭಾರತ ಪುರುಷರ ತಂಡ ಇಂದು ಬೆಲ್‌ಫಾಸ್ಟ್‌ನಲ್ಲಿ ಮೊದಲ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯದಲ್ಲಿ ಆತಿಥೇಯ ಐರ್ಲೆಂಡ್ ವಿರುದ್ಧ ಸೆಣಸಲಿದೆ. ಈ ಪಂದ್ಯ ಭಾರತೀಯ ಕಾಲಮಾನ ಸಂಜೆ ೬ ಗಂಟೆಗೆ ಆರಂಭವಾಗಲಿದೆ. ಭಾರತ ಭಾನುವಾರ ಐರ್ಲೆಂಡ್ ವಿರುದ್ಧ ಎರಡನೇ ಮತ್ತು ಅಂತಿಮ ಟಿ-೨೦ ಅಂತಾರಾಷ್ಟ್ರೀಯ ಪಂದ್ಯವನ್ನು ಆಡಲಿದೆ. ನಂತರ, ಶ್ರೇಯಸ್ ಅಯ್ಯರ್ ನೇತೃತ್ವದ ಭಾರತೀಯ ಪುರುಷರ ತಂಡ, ಮುಂದಿನ ತಿಂಗಳು ೧ ರಿಂದ ಪ್ರಾರಂಭವಾಗುವ ಐದು ಪಂದ್ಯಗಳ ಟಿ-೨೦ ಅಂತಾರಾಷ್ಟ್ರೀಯ ಸರಣಿಗಾಗಿ ಇಂಗ್ಲೆಂಡ್‌ಗೆ ಪ್ರಯಾಣ ಬೆಳೆಸಲಿದೆ. ಅಲ್ಲಿ ಮೂರು ಪಂದ್ಯಗಳ ಏಕದಿನ ಸರಣಿ ನಡೆಯಲಿದೆ.

*****END****